ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 22–11–2019

## ಪತ್ರಿಕಾ ಪ್ರಕಟಣೆ

### ನವೆಂಬರ್ 26 ರಂದು ಸಂವಿಧಾನ ದಿನಾಚರಣೆ

ಬೆಂಗಳೂರು, ನವೆಂಬರ್ 22 ( ಕರ್ನಾಟಕ ವಾರ್ತೆ ) :

ಭಾರತವು ಸಂವಿಧಾನವನ್ನು ಅಳವಡಿಸಿಕೊಂಡ ಸಂಸ್ಮರಣೆಗಾಗಿ ಕರ್ನಾಟಕ ವಿಧಾನ ಮಂಡಲವು ನವೆಂಬರ್ 26 ರಂದು ಸಂವಿಧಾನ ದಿನಾಚರಣೆಯ ಸಮಾರಂಭವನ್ನು ಆಯೋಜಿಸಿದೆ.

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಹಾಗೂ ಕರ್ನಾಟಕ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ವಿಧಾನ ಸೌಧದ ಮುಂಭಾಗದಲ್ಲಿರುವ ಸಂವಿಧಾನ ಶಿಲ್ಪಿ ಡಾ ಬಿ ಆರ್ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರೊಂದಿಗೆ ಪ್ರಾರಂಭವಾಗಲಿರುವ ಈ ಸಮಾರಂಭವು ವಿಧಾನ ಸೌಧದ ಔತಣ ಸಭಾಂಗಣದಲ್ಲಿ ಭಾರತ ಸಂವಿಧಾನದ ಮಹತ್ವ ಮತ್ತು ಪ್ರಾಮುಖ್ಯತೆ ಕುರಿತು ತಜ್ಞರು ಪ್ರಧಾನ ಭಾಷಣ ಮಾಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

********

ಡಿ ಪಿ ಎಂ

## CONSTITUTIONAL DAY ON NOVEMBER 26

**BENGALURU, NOVEMBER 22 ( KARNATAKA INFORMATION ) :**

**The Karnataka Legislature has organized Constitutional Day to commemorate the adoption of Constitution for India.**

**The function will begin with the Garlanding of the Statue of the Architect of the Constitution Dr B R Ambedkar in front of Vidhana Soudha by the Chairman of the Karnataka Legislative Council K. Prathap Chandra Shetty and the Speaker of the Karnataka Legislative Assembly Vishweswara Hegde Kageri and a Key Note Address by**

**Experts on the Significance and Importance of Indian Constitution at the Banquet Hall of Vidhana Soudha, says an official press release.**

*************

**D P M**

## <u>ಸಚಿವರ ಪ್ರವಾಸ</u>

ಬೆಂಗಳೂರು, ನವೆಂಬರ್ 22 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಕಾರ್ಮಿಕ ಸಚಿವ ಎಸ್. ಸುರೇಶ್‌ಕುಮಾರ್ ಅವರು ನವೆಂಬರ್ 25 ರಂದು ಕೋಲಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಸಂಜೆ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## <u>ಪತ್ರಿಕಾ ಪ್ರಕಟಣೆ</u>

ಬೆಂಗಳೂರು, ನವೆಂಬರ್ 22 ( ಕರ್ನಾಟಕ ವಾರ್ತೆ ) :

ಗ್ರಾಹಕ ಸಂರಕ್ಷಣಾ ರೆಗ್ಯುಲೇಷನ್ 2005 ನಿಯಮ 20(1) ರಿಂದ (5) ರವರೆಗೆ ಇರುವ ನಿಯಮಗಳನ್ನು ಅನುಸರಿಸಿಕೊಂಡು, ಈ ವೇದಿಕೆಯಲ್ಲಿ 1991 ನೇ ಇಸವಿಯಿಂದ 2014 ನೇ ಇಸವಿಯವರೆಗೆ ದಾಖಲಾಗಿ ವಿಲೇವಾರಿಗೊಂಡಿರುವ ಗ್ರಾಹಕ ವ್ಯಾಜ್ಯಗಳ ದೂರುಗಳು ಹಾಗೂ ಅಮಲ್ಜಾರಿ ಪ್ರಕರಣಗಳನ್ನು ಅಂದರೆ ಇತ್ಯರ್ಥಿಗೊಂಡು ಐದು (5) ವರ್ಷ ಅವಧಿ ಪೂರೈಸಿರುವ ಪ್ರಕರಣಗಳನ್ನು ಹಾಗೂ ಯಾವುದೇ ಮೇಲ್ಮನವಿ, ರಿಟ್ ಅರ್ಜಿ, ಪುನರ್ ಪರಿಶೀಲನಾ ಅರ್ಜಿಗಳು ಹಾಗೂ ಯಾವುದೇ ತಡೆಯಾಜ್ಞೆ ಬಾಕಿ ಇಲ್ಲದೇ ಇರುವಂತಹ ಪ್ರಕರಣಗಳನ್ನು ಸದರಿ ಆದೇಶದ ನಿಯಮಾನುಸಾರ ನಾಶಗೊಳಿಸುವ ಸಂಬಂಧ ಕ್ರಮಕೈಗೊಳ್ಳುತ್ತಿರುವುದರಿಂದ, 1991ನೇ ಇಸವಿಯಿಂದ 2014 ನೇ ಇಸವಿಯವರೆಗೆ ಬೆಂಗಳೂರು ನಗರ 2 ನೇ ಹೆಚ್ಚುವರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ, ಬೆಂಗಳೂರು ಇಲ್ಲಿ ದಾಖಲಾಗಿ ಇತ್ಯರ್ಥಗೊಂಡಿರುವ ಗ್ರಾಹಕ ವ್ಯಾಜ್ಯಗಳ ದೂರುಗಳು ಹಾಗೂ ಅಮಲ್ಜಾರಿ ಪ್ರಕರಣಗಳಲ್ಲಿ ಮೂಲ ದಾಖಲೆಗಳನ್ನು ಹಿಂಪಡೆಯಲು ಸಂಬಂಧಿಸಿದ ಪಕ್ಷಕಾರರು ಅಥವಾ ವಕೀಲರುಗಳು ಈ ಕಚೇರಿ ಹೊರಡಿಸಿದ ದಿನಾಂಕದಿಂದ ಒಂದು ತಿಂಗಳೊಳಗಾಗಿ ಈ ಕಚೇರಿಯಲ್ಲಿ ಖುದ್ದಾಗಿ ಹಾಜರಾಗಿ ಅರ್ಜಿಯನ್ನು ಸಲ್ಲಿಸಿ ಪಡೆದುಕೊಳ್ಳತಕ್ಕದ್ದು ತಪ್ಪಿದ್ದಲ್ಲಿ ಉಲ್ಲೇಖಿತ ಆದೇಶದನ್ವಯ ಮೇಲ್ಕಂಡ ಅವಧಿಯ ಪ್ರಕರಣಗಳನ್ನು ನಾಶಗೊಳಿಸಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು ಎಂದು ಬೆಂಗಳೂರು ನಗರ 2ನೇ ಹೆಚ್ಚುವರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ ಪ್ರಕಟಣೆ ತಿಳಿಸಿದೆ.

# <u>ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ</u>

**ಬೆಂಗಳೂರು, ನವೆಂಬರ್ 22 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 24–11–2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**<u>I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ</u>**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀಮತಿ ಪೂಜಾ ಭಾಸ್ಕರ್ ಮತ್ತು ತಂಡದವರಿಂದ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ **ಬಾಲಭವನ ಸೊಸೈಟಿ** ಸಹಯೋಗದೊಂದಿಗೆ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಕಲಾಸಿಂಧು ಅಕಾಡೆಮಿ ಆಫ್ ಡ್ಯಾನ್ಸ್ ತಂಡದವರಿಂದ ಸಮೂಹ ನೃತ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.